# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದರವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1631

ಉತ್ತರ ದಿನಾಂಕ : 11.03.2022

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಜಲ ಜೀವನ್ ಮಿಷನ್ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ ಹಾಗೂ ಈ ಯೋಜನೆಯ ಉದ್ದೇಶವೇನು; | ಜಲ ಜೀವನ್ ಮಿಷನ್ ಯೋಜನೆಯು 15 ಆಗಸ್ಟ್ 2019 ರಂದು ಘೋಷಿಸಲಾಗಿದ್ದು ಯೋಜನೆಯ ಕಾರ್ಯಕಾರಿ ಮಾರ್ಗಸೂಚಿಯು ಡಿಸೆಂಬರ್ 2019 ರಂದು ಹೊರಡಿಸಲಾಗಿರುತ್ತದೆ.<br>ಸದರಿ ಯೋಜನೆಯಡಿ 2024ರೊಳಗಾಗಿ ರಾಜ್ಯದ ಎಲ್ಲಾ ಗ್ರಾಮೀಣ ಮನೆಗಳಿಗೆ 55 LPCD ಯಂತೆ ಶುದ್ಧ ಕುಡಿಯುವ ನೀರನ್ನು ಕಾರ್ಯಾತ್ಮಕ ನಳ ಸಂಪರ್ಕ ಮೂಲಕ ಸಮುದಾಯದ ಸಹಭಾಗಿತ್ವದೊಂದಿಗೆ ಒದಗಿಸುವ ಉದ್ದೇಶ ಹೊಂದಲಾಗಿದೆ. |
| ಆ) | ಕೋಲಾರ ಜಿಲ್ಲೆಯಲ್ಲಿ ಈ ಯೋಜನೆಯಡಿ ಇದುವರೆಗೂ ಎಷ್ಟು ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಹಾಗೂ ಎಷ್ಟು ನೀರಿನ ಸಂಪರ್ಕ ಕಲ್ಪಿಸುವ ಗುರಿ ಹೊಂದಿದೆ; | ಕೋಲಾರ ಜಿಲ್ಲೆಯಲ್ಲಿ ಜೆ.ಜೆ.ಎಂ. ಯೋಜನೆಯಡಿ ಪ್ರಸ್ತುತ ಸಾಲಿನಲ್ಲಿ 1,22,140 ಕಾರ್ಯಾತ್ಮಕ ನಳ ನೀರು ಸಂಪರ್ಕ ಒದಗಿಸಲು ಕ್ರಿಯಾ ಯೋಜನೆ ಅನುಮೋದನೆಗೊಂಡಿದ್ದು, ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿರುತ್ತವೆ ಮತ್ತು 60,626 ಕಾರ್ಯಾತ್ಮಕ ನಳ ನೀರು ಸಂಪರ್ಕ ಕಲ್ಪಿಸಲು ಗುರಿಯನ್ನು ಹೊಂದಿದೆ. |
| ಇ) | ಈ ಯೋಜನೆಯ ಅನುಷ್ಠಾನಕ್ಕೆ ಯಾವ ರೀತಿಯ ತಾಂತ್ರಿಕತೆಯನ್ನು ಅಳವಡಿಸಿ ಕೊಳ್ಳಲಾಗುವುದು; | ಯೋಜನೆಯ ಅನುಷ್ಠಾನಕ್ಕೆ ಜಿಲ್ಲೆಯಲ್ಲಿ Source Finding Committee ಅನ್ನು ರಚಿಸಲಾಗಿದ್ದು, ಸುಸ್ಥಿರವಾದಂತಹ ಜಲಮೂಲಗಳಿಂದ ಮನೆಮನೆಗೂ ಕಾರ್ಯಾತ್ಮಕ ನಳ ಸಂಪರ್ಕವನ್ನು ಕಲ್ಪಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| ಈ) | ಜಿಲ್ಲೆಗೆ ಈ ಯೋಜನೆಯಡಿ ಮಂಜೂರಾಗಿರುವ ಅನುದಾನವೆಷ್ಟು; ಇದನ್ನು ಅನುಷ್ಠಾನಕ್ಕೆ ತರುವವರು ಯಾರು? | ಕೋಲಾರ ಜಿಲ್ಲೆಗೆ ಈ ಯೋಜನೆಯಡಿ ರೂ.31405.33ಲಕ್ಷಗಳ ಅನುದಾನಕ್ಕೆ 734 ಕಾಮಗಾರಿಗಳು ಅನುಮೋದನೆಗೊಂಡಿರುತ್ತದೆ. ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿರುತ್ತವೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಗ್ರಾಮ ಪಂಚಾಯಿತಿಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುವು ದು. |

ಸಂ:ಗ್ರಾಕುನೀ&ನೈಇ 158 ಗ್ರಾನೀಸ(4)2022

(ಕೆ.ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು